# ಬೆಳಗಾವಿಯಲ್ಲಿ ರೋಟರಿ ಕ್ಲಬ್‌ನ 5 ದಿನಗಳ "ಕೃಷಿ ಉತ್ಸವ"ಕ್ಕೆ ಚಾಲನೆ



ಬೆಳಗಾವಿ, : ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಕೃಷಿ ವಿಶ್ವವಿದ್ಯಾಲಯ ಧಾರವಾಡ ಮತ್ತು ರೋಟರಾಕ್ಟ ಕ್ಲಬ್ ಆಫ್ ಬೆಲಗಾಮ್ ಸೆಂಟ್ರಲ್ ಇವರ ಸಹಕಾರದಲ್ಲಿ 'ರೋಟರಿ ಕ್ಲಬ್ ಆಫ್ ಬೆಲಗಾಮ್ ಸೆಂಟ್ರಲ್' ವತಿಯಿಂದ ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ಆಯೋಜಿಸಿರುವ ಐದು ದಿನಗಳ "ಬೆಳಗಾವಿ ಕೃಷಿ ಉತ್ಸವ" ಗುರುವಾರದಿಂದ ಆರಂಭಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಿ, ರೋಟರಿ ಕ್ಲಬ್ ಅನೇಕ ಉತ್ಸವಗಳನ್ನು ಆಯೋಜಿಸಿದ್ದು ಆದರೆ ಕೃಷಿ ಕುರಿತು ಆಯೋಜಿಸಿರುವ ಮೊದಲ ಉತ್ಸವ ಇದಾಗಿದೆ. ಅವರ ಮೊದಲ ಉತ್ಸವವೇ ಉತ್ತೇಜನಾತ್ಮಕವಾಗಿದೆ. ಪ್ರತಿ ವರುಷ ಕೃಷಿ ಕುರಿತು ಉತ್ಸವ ಮಾಡಿದರೆ ರೈತರಿಗೆ ಹೆಚ್ಚು ಅನುಕೂಲ ಆಗುವುದು. ಪ್ರಥಮ ಯತ್ನದಲ್ಲೇ ರೋಟರಿ ಕ್ಲಬ್ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಬೇರೆ ಬೇರೆ ಕ್ಷೇತ್ರಗಳಲ್ಲಿ ದೇಶ ಸಾಕಷ್ಟು ಅಭಿವೃದ್ಧಿ ಕಂಡಿದೆ. ಇಷ್ಟೆಲ್ಲ ಮುಂದುವರೆದರೂ ಕೃಷಿ ಕ್ಷೇತ್ರದಲ್ಲಿ ನಾವು ಇನ್ನೂ 30% ರಷ್ಟು ಕ್ಷೇತ್ರ ತಲುಪಲು ಸಾಧ್ಯವಾಗಿಲ್ಲ. ಈ ರೀತಿಯ ಉತ್ಸವಗಳಿಂದ ಕೃಷಿಕರನ್ನು ಕ್ಷೇತ್ರದಲ್ಲೇ ಮುಂದುವರಿಯಲು ಸಹಕಾರಿಯಾಗಬಹುದು. ಸ್ಟಾಲ್ಸಗಳಲ್ಲಿ ಪ್ರದರ್ಶನಕ್ಕಿಡಲಾಗಿರುವ ಸಲಕರಣೆ, ಬಿತ್ತನೆ ಬೀಜ, ಗೊಬ್ಬರಗಳನ್ನು ಬಳಸುವುದರಿಂದ ನಿರೀಕ್ಷೆಗಿಂತ ಹೆಚ್ಚು ಇಳುವರಿ ಪಡೆಯಲು ಸಾಧ್ಯವೆಂದು ಸಚಿವ ಜಾರಕಿಹೊಳಿ ಅಭಿಪ್ರಾಯಪಟ್ಟರು.ರೋಟರಿ ಕ್ಲಬ್ ನ ಮಂಜುನಾಥ ಅಳವಣಿ ಸ್ವಾಗತಿಸಿ ಪ್ರಾಸ್ತಾವಿಕ ಭಾಷಣ ಮಾಡಿ, ಉತ್ಸವದ ಕುರಿತು ಮಾಹಿತಿ ನೀಡಿದರು. ಕೃಷಿ ಕ್ಷೇತ್ರದ ಅತ್ಯಾಧುನಿಕತೆಗೆ ಪೂರಕವಾಗುವ ಸುಮಾರು 200 ಸ್ಟಾಲ್ ಇವೆ ಎಂದು ಅವರು ತಿಳಿಸಿದರು.ಕೃಷಿ ವಿಶ್ವವಿದ್ಯಾನಿಲಯ ಧಾರವಾಡದ ಉಪ ಕುಲಪತಿ ಪಿ ಎಲ್ ಪಾಟೀಲ ಮಾತನಾಡಿ, ರೋಟರಿ ಕ್ಲಬ್ ಸಾಮಾಜಿಕ ಮತ್ತು ಕೃಷಿ ಮೇಳದಂಥ ಅನೇಕ ಕಾರ್ಯಕ್ರಮ ಆಯೋಜಿಸಿ ಜನರನ್ನು ಉತ್ತೇಜಿಸುತ್ತಿದೆ. ಕೃಷಿಕರಿಗೆ ಅತ್ಯಾಧುನಿಕ ಮುಂದುವರೆದ ತಂತ್ರಜ್ಞಾನ ಬಳಸಿ ಜಮೀನಿನಲ್ಲಿ ಹೆಚ್ಚು ಇಳುವರಿ ಪಡೆಯಲು ಮಾರ್ಗದರ್ಶನ ಮತ್ತು ನೆರವು ನೀಡುತ್ತಿದೆ ಎಂದರು.ಜನರಿಗೆ ಅದರಲ್ಲೂ ಕೃಷಿಕ ಕುಟುಂಬದ ಯುವಕರು ಕೃಷಿ ಕ್ಷೇತ್ರದಲ್ಲಿ ಮುಂದುವರೆಯಲು ಉತ್ತೇಜಿಸುವ ಅಗತ್ಯವಿದ್ದು ರಾಜ್ಯದ ಆರೂ ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ರೈತರ ಕುಟುಂಬದ ಸದಸ್ಯರಿಗೆ 50% ಸೀಟ್ ಮೀಸಲಿಟ್ಟಿದೆ ಎಂದು ತಿಳಿಸಿದರು .ಕ್ಲಬ್ ಸದಸ್ಯ ನಾಸಿರ ಮಾತನಾಡಿ, ರೋಟರಿ ಕ್ಲಬ್ ಅನೇಕ ಉತ್ಸವ ಆಯೋ ಜಿಸಿದೆಯಾದರೂ ಕೃಷಿ ಉತ್ಸವವನ್ನು ಮೊದಲ ಸಲ ಆಯೋ ಜಿಸಿದೆ. ಇದನ್ನು ಮುಂದಿನ ಪ್ರತಿ ವರುಷವೂ ಆಯೋ ಜಿಸಲಾಗುವುದು ಎಂದರು.ಕೊನೆಯಲ್ಲಿ ಕ್ಲಬ್ ನ ಹಿಂದಿನ ಅಧ್ಯಕ್ಷ ಶಕೀಲ ಶೇಖ ಅಲಿ ವಂದಿಸಿ, ಉತ್ಸವದಲ್ಲಿ ರೈತರಿಗೆ ಪ್ರತಿದಿನ ಸಲಹಾ ಕಾರ್ಯಾಗಾರ

# ಶಿವನ ಧ್ಯಾನದಿಂದ ಶಾಂತಿ, ನೆಮ್ಮದಿ ಪ್ರಾಪ್ತಿ'– ರೇಖಾ ಅಕ್ಕನವರು



ಮೂಡಲಗಿ: 'ಶಿವರಾತ್ರಿಯು ಪವಿತ್ರ ದಿನವಾಗಿದ್ದು, ಶಿವರಾತ್ರಿಯಂದು ಮಾಡುವ ಉಪವಾಸ, ಧ್ಯಾನ, ಪ್ರಾರ್ಥನೆಗಳು ಶಿವನನ್ನು ಪ್ರಸನ್ನಗೊಳಿಸಿ ಆತನ ಅನುಗ್ರಹವು ದೊರೆಯುವುದು' ಎಂದು ಈಶ್ವರಿ ವಿಶ್ವವಿದ್ಯಾಲಯದ ಸಂಚಾಲಕಿ ರೇಖಾ ಅಕ್ಕಾ ಅವರು ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಆಚರಿಸಿದ ಮಹಾಶಿವರಾತ್ರಿ ಮತ್ತು ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿದ ಅವರು ಶುದ್ಧ ಮನಸ್ಸಿನಂದ ಶಿವನ ಧ್ಯಾನ ಮತ್ತು ಸಾತ್ವಿಕ ಆಹಾರವು ಮನುಷ್ಯನಲ್ಲಿ ಶಾಂತಿ, ನೆಮ್ಮದಿ ಪ್ರಾಪ್ತಿಯಾಗುವುದು' ಎಂದರು.

ಸವಿತಾ ಅಕ್ಕನವರು, ಸುಕನ್ಯಾ ಅಕ್ಕನವರು, ಶಿವಪುತ್ರಯ್ಯ ಮಠಪತಿ, ವೈ.ಬಿ. ಕುಲಿಗೋಡ, ಈರಪ್ಪ ಹಂದಿಗುಂದ, ಮಲ್ಲಿಕಾರ್ಜುನ ಎಮ್ಮಿ, ಗುರುಲಿಂಗಪ್ಪ ಶೀಲವಂತ, ಬಾಲಶೇಖರ ಬಂದಿ, ಗೋಪಾಲ ಗಂಗರಡ್ಡಿ, ಮಹಾನಂದಾ ತಾಂವಶಿ, ಮಹಾದೇವಿ ತಾಂವಶಿ, ರಜನ ಬಂದಿ, ಸರೋಜಾ ಹೊಸೂರ, ಬಾಳವ್ವಾ, ವೀಣಾ ಗಾಡವಿ, ಕಮಲಾ ಶೀಲವಂತ, ಲಕ್ಷ್ಮೀ, ರೇಖಾ ದುಗ್ಗಾಣಿ ಇದ್ದರು.

ಸಮಾರಂಭದ ಪೂರ್ವದಲ್ಲಿ ಈಶ್ವರಿ ವಿಶ್ವವಿದ್ಯಾಲಯದ ಧ್ವಜಾರೋಹಣ ನೆರವೇರಿಸಿದರು ಮತ್ತು ಶಿವಪೂಜೆ ಜರುಗಿತು. ಸಮಾರಂಭದ ನಂತರ ಭಕ್ತರಿಗೆ ಸಾತ್ವಿಕ ಆಹಾರ ವಿತರಿಸಿದರು.

# ದೇವಗಿರಿಯಲ್ಲಿ ಶ್ರೀ ಗುರು ಪುಟ್ಟರಾಜ ಪುರಸ್ಕಾರ




ಗದಗ : ಲಿಂ. ಪಂ. ಪುಟ್ಟರಾಜರ ಹುಟ್ಟೂರು ದೇವಗಿರಿಯು ಮುಂದಿನ ದಿನಮಾನಗಳಲ್ಲಿ ಪ್ರಸಿದ್ಧ ಪುಣ್ಯಕ್ಷೇತ್ರವಾಗಿ, ಸುಂದರ ಪ್ರವಾಸಿ ತಾಣವಾಗಿ ಅಭಿವೃದ್ಧಿಗೊಳ್ಳಬೇಕೆಂದು ಶಿರಹಟ್ಟಿಯ ಪೂಜ್ಯ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗಾನ ಗಂಧರ್ವ ಕಲಾ ಟ್ರಸ್ಟ್ ಗದಗ ಹಾಗೂ ಡಾ. ಪಂ ಪುಟ್ಟರಾಜ ಕವಿ ಗವಾಯಿಗಳವರ ಸಂಗೀತ ಪಾಠಶಾಲೆ, ಧಾರ್ಮಿಕ ಮತ್ತು ಸಂಸ್ಕೃತಿಕ ಕೇಂದ್ರ ದೇವಗಿರಿ ಇವರ ಸಹಯೋಗದಲ್ಲಿ ಪದ್ಮಭೂಷಣ ಪುಟ್ಟರಾಜ ಗವಾಯಿಗಳವರ ಕಂಚಿನ ಪುತ್ಥಳಿಯ ಪ್ರತಿಷ್ಠಾಪನೆ, ಪಂ.ಪುಟ್ಟರಾಜ ಗವಾಯಿಗಳವರ ಮಠದ ಗೋಪುರಕ್ಕೆ ಕಳಸಾರೋಹಣ, ಪೂಜ್ಯರ 110ನೇ ಜಯಂತ್ಯೋತ್ಸವ, ಶ್ರೀ ಗುರು ಪುಟ್ಟರಾಜ ಪುರಸ್ಕಾರ, ಪುಟ್ಟರಾಜ ಸಂಗೀತ ಸಮಾರೋಹ ಮತ್ತು ಸಾಮೂಹಿಕ ವಿವಾಹಗಳ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಸವರಾಜ ಶಿವಣ್ಣನವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಬಯಲು ರಂಗ ಭೂಮಿಗೆ ಮೇಲ್ಛಾವಣಿ ಹಾಕಿಸುವ ಹಾಗೂ ಸುಕ್ಷೇತ್ರ ದೇವಗಿರಿಯನ್ನು ಪ್ರವಾಸಿ ತಾಣವಾಗಿಸುವ ಕುರಿತು ಸಚಿವ ಎಚ್. ಕೆ. ಪಾಟೀಲರ ಜೊತೆ ಚರ್ಚಿಸಿ ಅಭಿವೃದ್ಧಿ ಪಡಿಸುವ ಭರವಸೆ ನೀಡಿದರು.

ಶಿವರಾಜ ಸಜ್ಜನರ ಅಧ್ಯಕ್ಷತೆವಹಿಸಿ ಮಾತನಾಡಿ, ದೇವಗಿರಿ ಗ್ರಾಮದ ಅಭಿವೃದ್ಧಿಗೆ ತಮ್ಮ ಪ್ರಯತ್ನಕ್ಕೆ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ ಅರ್ಪಿಸಿ ಇದೇ ಸಹಕಾರ ಮುಂದಿನ ಅಭಿವೃದ್ಧಿ ಕಾರ್ಯಗಳಲ್ಲೂ ಜನತೆ ನೀಡಲಿ ಎಂಬ ಆಶಯ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಶ್ರೀ ಗುರು ಪುಟ್ಟರಾಜ ಪುರಸ್ಕಾರವನ್ನು ನಾಗಲಿಂಗಯ್ಯ ವಸ್ತ್ರದಮಠ (ಗಾನಶ್ರೀ), ಶಂಕರ .ಕಬಾಡಿ (ವಾದನ ಶ್ರೀ), ಐ.ಕೆ.ಕಮ್ಮಾರ (ಸಾಹಿತ್ಯಶ್ರೀ), ಅಶೋಕ ಬಸ್ತಿ (ರಂಗಶ್ರೀ), ಚನ್ನವೀರಯ್ಯಶಾಸ್ತ್ರಿ ಹಿರೇಮಠ (ಕೀರ್ತನಶ್ರೀ) ಇವರಿಗೆ ಪ್ರಧಾನ ಹಾಗೂ ಡಾ. ಎಸ್ .ಬಿ. ಶೆಟ್ಟರ ಮತ್ತು ಪೂಜ್ಯರ ಕಂಚಿನ ಪುತ್ತಳಿಯ ಶಿಲ್ಪಿ .ಬಿ.ಸಿ ಶಿವಕುಮಾರ ಇವರಿಗೆ ' ವೈದ್ಯ ಶ್ರೀ – ಶಿಲ್ಪ ಶ್ರೀ' ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಲಾಯಿತು.

ಬಾಲ ಪ್ರತಿಭೆ ಉಮಾಶ್ರೀ ಗಡ್ಡದಿಮಠ, ಗಾಯತ್ರಿ ಹಿರೇಮಠ, ಚರಣ. ಗಡ್ಡದಮಠ, ಪಂಚಾಕ್ಷರಿ ಹಿರೇಮಠರಿಂದ ಗಾಯನ, ದೇವಗಿರಿ ಎಲ್ಲಾಪುರ ಗ್ರಾಮಗಳ ಸರ್ಕಾರಿ ಪ್ರೌಢ ಮತ್ತು ಪ್ರಾಥಮಿಕ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಜಿ. ಸುರಭಿ ಸುರೇಶರ ಗಾಯನ, ಸೃಷ್ಟಿ ಸುರೇಶ ಸಿತಾರ ವಾದನ , ಗಿರಿಮಲ್ಲಿಕಾ ಮಾಂತ, ಸೃಷ್ಟಿ ಕೃಷ್ಣ. ಕೆ .ಮಂಗಳೂರು, ಲತಾ ಹುಲಿಕಂತಿಮಠ ಹಾಗೂ ಹರ್ಷಿತಾ ಅಚಲಕರ ರಿಂದ ಭರತನಾಟ್ಯ ಪ್ರದರ್ಶನ ಜರುಗಿದವು. ಪೂಜ್ಯಶ್ರೀ ಡಾ. ವೀರೇಶ್ವರ ಶರಣರ ಕೃತಿ "ಶಿವ ಪೂಜಾ ವಿಧಿ" ಹಾಗೂ ಐ.ಕೆ. ಕಮ್ಮಾರರ ಗ್ರಂಥ ' ಭೂಲೋಕದ ಭಗವಂತ' ಪೂಜ್ಯ ದಿಂಗಾಲೇಶ್ವರ ಶ್ರೀಗಳಿಂದ ಬಿಡುಗಡೆಗೊಂಡವು.

ವಿವಿಧ ಕ್ಷೇತ್ರಗಳ ಗಣ್ಯಮಾನ್ಯರು ಮತ್ತು ವಿಶೇಷ ಅತಿಥಿಗಳಾಗಿ ಆಗಮಿಸಿದ್ದ ಶ್ರೀ ಪ್ರಕಾಶ್ ಪೈ ಪ್ರೆಸಿಡೆಂಟ್ ಸುಪ್ರೀಂ ಗ್ರೂಪ್. ಬೆಂಗಳೂರು ಹಾಗೂ ಆರ್ ಮಲ್ಲಿಕಾರ್ಜುನ ಫಿಲ್ಕಾನ ಸೇಲ್ಸ್– ಸರ್ವಿಸಸ್ ಇಂಡಸ್ಟ್ರಿಯಲ್ ಮಾಲೀಕರು ಬೆಂಗಳೂರು ಉಪಸ್ಥಿತರಿದ್ದರು. ಸಿದ್ದಲಿಂಗಯ್ಯಶಾಸ್ತ್ರಿ ಗಡ್ಡದಮಠ, ಕುಮಾರಸ್ವಾಮಿ ಹಿರೇಮಠ ಮತ್ತು ಶಿವಯೋಗಿ. ಗಡ್ಡದಮಠ ಕಾರ್ಯಕ್ರಮ ನಿರೂಪಿಸಿದರು.ವಿವಿಧ ಕ್ಷೇತ್ರಗಳ ಗಣ್ಯಮಾನ್ಯರು ಮತ್ತು ವಿಶೇಷ ಅತಿಥಿಗಳಾಗಿ ಆಗಮಿಸಿದ್ದ ಶ್ರೀ ಪ್ರಕಾಶ್ ಪೈ ಪ್ರೆಸಿಡೆಂಟ್ ಸುಪ್ರೀಂ ಗ್ರೂಪ್. ಬೆಂಗಳೂರು ಹಾಗೂ ಆರ್ ಮಲ್ಲಿಕಾರ್ಜುನ ಫಿಲ್ಕಾನ ಸೇಲ್ಸ್–ಸರ್ವಿಸಸ್ ಇಂಡಸ್ಟ್ರಿಯಲ್ ಮಾಲೀಕರು ಬೆಂಗಳೂರು ಉಪಸ್ಥಿತರಿದ್ದರು. ಸಿದ್ದಲಿಂಗಯ್ಯಶಾಸ್ತ್ರಿ ಗಡ್ಡದಮಠ, ಕುಮಾರಸ್ವಾಮಿ ಹಿರೇಮಠ ಮತ್ತು ಶಿವಯೋಗಿ. ಗಡ್ಡದಮಠ ಕಾರ್ಯಕ್ರಮ ನಿರೂಪಿಸಿದರು.

# ಸ್ವಾರ್ಥರಹಿತ ರಾಜಕಾರಣ ಮುಖ್ಯ: ಲಕ್ಷ್ಮೀ ಹೆಬ್ಬಾಳಕರ್

## ಸಮುದಾಯ ಭವನ ಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಸಚಿವೆ ಹೇಳಿಕೆ




ಬೆಳಗಾವಿ : ಜನರ ಪ್ರೀತಿ, ವಿಶ್ವಾಸ ನನಗೆ ಮುಖ್ಯ. ನಾನು ಎಂದೂ ದ್ವೇಷ ರಾಜಕೀಯ ಮಾಡುವುದಿಲ್ಲ. ನನಗೆ ರಾಜಕೀಯ ಪುನರ್ಜನ್ಮ ನೀಡಿದ ಬೆಳಗಾವಿ ಗ್ರಾಮೀಣ ಕ್ಷೇತ್ರದ ಜನರ ಋಣ ತೀರಿಸಲು ಸಾಧ್ಯವಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಸತತ ಎರಡು ಚುನಾವಣೆಯಲ್ಲಿ ಸೋತರೂ ನನಗೆ ಧೈರ್ಯ ತುಂಬಿದ ಕ್ಷೇತ್ರದ ಜನರಿಗೆ ನಾನು ಜೀವನ ಪರ್ಯಂತ ಋಣಿಯಾಗಿರುವೆ ಎಂದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಮಾರಿಹಾಳ ಗ್ರಾಮದಲ್ಲಿ ಗುರುವಾರ ಸಂಜೆ ಮುತಗಾ, ಮೊದಗಾ, ತುಮ್ಮರಗುದ್ದಿ, ಕರಡಿಗುದ್ದಿ ಹಾಗೂ ಮಾರಿಹಾಳ ಈ ಎಲ್ಲ ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.

*ರಾಮ ರಾಜ್ಯದ ಪರಿಕಲ್ಪನೆಯ ಸರ್ಕಾರ

ನಾನು ಅಪ್ಪಟ ರಾಮಭಕ್ತಳು. ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಕೂಡ ರಾಮ ರಾಜ್ಯ ಪರಿಕಲ್ಪನೆಯಲ್ಲಿ ಕಾರ್ಯನಿರ್ವಹಿಸುತ್ತಿದೆ. ನಮ್ಮ ಸರ್ಕಾರ ಪ್ರತಿ ತಿಂಗಳು ಜನರ ಗ್ಯಾರಂಟಿ ಯೋಜನೆಗಳಿಗಾಗಿ 5 ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಇದು ನಿಜವಾದ ರಾಮ ರಾಜ್ಯದ ಪರಿಕಲ್ಪನೆ ಎಂದು ಹೇಳಿದರು. ಗ್ಯಾರಂಟಿ ಯೋಜನೆಗಳಿಂದ ಜನರು ಖುಷಿಯಾಗಿದ್ದಾರೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೇ ನಮ್ಮ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಮೂಲಕ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಹಣ ತಲುಪುತ್ತಿದೆ ಎಂದು ಸಚಿವರು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಸತೀಶ್ ಜಾರಕಿಹೊಳಿ ಅವರ ಆಶೀರ್ವಾದ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ಇಂದು ಕ್ಷೇತ್ರದ ಮನೆಮಗಳಾಗಿ ಕಾರ್ಯನಿರ್ವಹಿಸುತ್ತಿರುವೆ. ಬೆಳಗಾವಿ ಗ್ರಾಮೀಣ ಕ್ಷೇತ್ರ ಸಿಕ್ಕಿದ್ದು, ನನ್ನ ಪೂರ್ವ ಜನ್ಮದ ಪುಣ್ಯ ಎಂದು ಸಚಿವರು ಹೇಳಿದರು. ಧರ್ಮರಾಯನ ಧರ್ಮ, ಅರ್ಜುನನ ಗುರಿ, ಕೃಷ್ಣನ ಚತುರತೆ, ವಿಧುರನ ಬುದ್ಧಿ, ಭೀಮನ ಬಲ, ರಾಮನ ಉದಾರತೆ, ಶಿವಾಜೀ ಮಹರಾಜರ ಧೈರ್ಯ.ಈ ಗುಣಗಳು ಇದ್ದಾಗ ಮಾತ್ರ ಒಳ್ಳೆಯ ನಾಯಕರಾಗಲು ಸಾಧ್ಯ. ನಾಯಕತ್ವ ಗುಣದ ಜೊತೆಗೆ ವಿನಮ್ರತೆಯೂ ಇರಬೇಕು. ಆ ವಿನಮ್ರತೆ ಇದ್ದಾಗಷ್ಟೆ ರಾಜಕೀಯ ನಾಯಕರಿಗೆ ಸಾರ್ಥಕತೆ ಇರುತ್ತದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ನಾನೆಂದು ಜಾತಿ ರಾಜಕೀಯ ಮಾಡುವುದಿಲ್ಲ. ನಾನು ಹುಟ್ಟಿದ್ದು ಲಿಂಗಾಯತ ಸಮಾಜವಾದರೂ ನನಗೆ ಪುನರ್ಜನ್ಮ ಕೊಟ್ಟಿದ್ದು ಕ್ಷೇತ್ರದ ಮತದಾರರು. ಸ್ವಾರ್ಥ ರಹಿತ ರಾಜಕೀಯ ಮಾಡುವುದೇ ನನ್ನ ಗುರಿ ಎಂದರು.ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷರಾದ ಶಂಕರಗೌಡ ಪಾಟೀಲ, ಗ್ರಾಮ ಪಂಚಾಯತ್ ಅಧ್ಯಕ್ಷೆ ಗಿರಿಜಾ ಪಾಟೀಲ, ಉಪಾಧ್ಯಕ್ಷ ಆಸೀಫ್ ಮುಲ್ಲಾ, ರಾಮಚಂದ್ರ ಚವ್ಹಾಣ, ಮಹಮ್ಮದ್ ಗೌಸ ಭಾಗವಾನ್, ಕಲ್ಲಪ್ಪ ಸೀತಿಮನಿ, ನಾರಾಯಣ ಸೊಗಲಿ, ಸಂಜಯ್ ಚಾಟೆ, ಬಸವರಾಜ ಮ್ಯಾಗೋಟಿ, ಪಿಡಿಓ ರಾಣಿ ಪೂಜಾರ, ಲಕ್ಷ್ಮೀನಾರಾಯಣ ಕಲ್ಲೂರ್, ನಿರ್ಮಿತ್ರ ಕೇಂದ್ರ ಪ್ರೊಜೆಕ್ಟ್ ಡೈರೆಕ್ಟರ್ ಶೇಖರಗೌಡ ಕುರಡಗಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಮುದಾಯ ಭವನ ನಿರ್ಮಾಣಕ್ಕೆ ಸಚಿವೆ ಗುದ್ದಲಿ ಪೂಜೆ

## ಮಹಾಬಲೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ ಲಕ್ಷ್ಮೀ ಹೆಬ್ಬಾಳ್ಕರ್



ಬೆಳಗಾವಿ : ಸಹ್ಯಾದ್ರಿ ನಗರದಲ್ಲಿರುವ ಶ್ರೀ ಮಹಾಬಳೇಶ್ವರ ದೇವಸ್ಥಾನದ ಆವರಣದಲ್ಲಿ ಸಮುದಾಯ ಭವನ, ಉದ್ಯಾನವನ ಹಾಗೂ ಬೊರವೆಲ್ ಹಾಕಿಸುವ ಕಾಮಗಾರಿಗಳಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಭೂಮಿ ಪೂಜೆ ನೆರವೇರಿಸಿದರು. ಮಹಾ ಶಿವರಾತ್ರಿಯ ಪ್ರಯುಕ್ತ ಮಹಾಬಳೇಶ್ವರ ಸ್ವಾಮಿಗೆ ವಿಶೇಷ ಪೂಜೆಯನ್ನು ಸಲ್ಲಿಸಿದ ಸಚಿವರು, ನಾಡಿನ ಸುಭೀಕ್ಷೆಗಾಗಿ ಪ್ರಾರ್ಥನೆ ಸಲ್ಲಿಸಿದರು. ಈ ವೇಳೆ ಅರ್ಚಕರಾದ ಅಡವಯ್ಯ ಹಿರೇಮಠ್, ವಿಜಯ ಹಿರೇಮಠ್, ಮಹಾಬಲೇಶ್ವರ ದೇವಸ್ಥಾನ ಸಮಿತಿಯ ಸದಸ್ಯರಾದ ಅಣ್ಣಯ್ಯ ಪಾಟೀಲ, ರಾಜು ಡೂಗನವರ, ಸುರೇಶ್ ಘೋರ್ಪಡೆ, ಸಂಜು ಅಂಗಡಿ, ಗೋಪಾಲ ಪಂಚಾಳ, ಹರೀಶ್ ಹಂಡೆ, ಮಲ್ಲಪ್ಪಾ ಮಾಕಿ, ಗುರುಸಿದ್ದ ಪಾಟೀಲ, ಅಡವಯ್ಯ ಸ್ವಾಮಿಗಳು, ರತ್ನಾ ಕುಲಕರ್ಣಿ, ಸುರಭಿ ಜಡಗಿ, ರಾಜಶ್ರೀ, ಅಶ್ವಿನ ಹಾವನ್ನಗೋಳ, ಸ್ನೇಹಾ ಪಾಟೀಲ ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ



ಬೆಳಗಾವಿ: ಸಮಾಜದಲ್ಲಿ ಮೂಡನಂಬಿಕೆ ಹಾಸುಹೊಕ್ಕಾಗಿರುವದರಿಂದ ದೇವದಾಸಿಯಂತ ಪದ್ದತಿ ಇನ್ನೂ ಜೀವಂತವಿದೆ. ಅದನ್ನು ಬೇರು ಸಮೇತ ಕಿತ್ತು ಹಾಕಲು ಮೊದಲು ಸಂಘಟಿತರಾಗಬೇಕು. ಅದಕ್ಕೆ ಮುಖ್ಯವಾಗಿರಬೇಕಾಗಿದ್ದು ಶಿಕ್ಷಣ. ಗ್ರಾಮಿಣ ಪ್ರದೇಶದಲ್ಲಿ ಇನ್ನೂ ಹೆಣ್ಣುಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದು, ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ ಸುಶಿಕ್ಷಿತರನ್ನಾಗಿಸುವ ಕಾರ್ಯ ಮಾಡಬೇಕಾಗಿದೆ ಎಂದು ಮೂಡಲಗಿಯ ಅಮ್ಮ ಸಂಸ್ಥೆಯ ಸಂಸ್ಥಾಪಕಿ ಶೋಭಾ ಗಸ್ತಿ ಅವರಿಂದಿಲ್ಲಿ ಹೇಳಿದರು.

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕೆಎಲ್‌ಇ ಸಂಸ್ಥೆಯ ಸ್ವ ಶಕ್ತಿ ಮಹಿಳಾ ಸಬಲೀಕರಣ ಘಟಕವು ಏರ್ಪಡಿಸಿದ್ದ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸಾಂಪ್ರದಾಯಿಕ ನಂಬಿಕೆಗಳನ್ನು ವಿರೋಧಿಸುವ ಗುಣಗಳನ್ನು ಬೆಳೆಸಿಕೊಂಡು ತನ್ನದೇ ಆದ ಮಾರ್ಗವನ್ನು ಕಂಡುಕೊಳ್ಳಬೇಕು. ಸಮಾಜದ ಮೇಲೆ ಪರಿಣಾಮ ಬೀರುವ ಮೂಡನಂಬಿಕೆಗಳಿಗೆ ಜೋತು ಬೀಳದೇ ಸುಶಿಕ್ಷಿತರಾಗಬೇಕು ಎಂದು ಕರೆ ನೀಡಿದ ಅವರು, 6ನೇ ತರಗತಿಯಲ್ಲಿ ಓದುತ್ತಿರುವಾಗಲೇ ದೇವರ ಹೆಸರಿನಲ್ಲಿ ಮುತ್ತು ಕಟ್ಟಿ ಅವರನ್ನು ಅಂಧಕಾರಕ್ಕೆ ತಳ್ಳಿರುವ ದುಃಖವನ್ನು ತೋಡಿಕೊಂಡರು. 1997 ರಲ್ಲಿ ಮಹಿಳಾ ಅಭಿವೃದ್ಧಿ ಮತ್ತು ಸಂರಕ್ಷಣಾ ಸಂಸ್ಥೆ ಪ್ರಾರಂಭಿಸಿ, ಕರ್ನಾಟಕದಾದ್ಯಂತ 360 ಹಳ್ಳಿಗಳಿಂದ 3,600 ಕ್ಕೂ ಅಧಿಕ ಮಕ್ಕಳನ್ನು ರಕ್ಷಿಸಲಾಗಿದೆ. 200ಕ್ಕೂ ಹೆಚ್ಚು ಹೆಣ್ಣು ಮಕ್ಕಳನ್ನು ಒಂದೇ ವರ್ಷದಲ್ಲಿ ಮರಳಿ ಶಾಲೆಗೆ ಕಳುಹಿಸುವ ಕಾರ್ಯ ಮಾಡಲಾಗಿದೆ ಎಂದು ತಿಳಿಸಿದರು. ಪಂಖ ಇಂಡಿಯಾ ಫಂಡೇಶನ್ ಹಾಗೂ ಪಂಖ ಹ್ಯಾಂಡಿಕ್ರಾಫ್ಟನ ಸಿಇಓ ಗೌರಿ ಮಾಂಜರೇಕರ ಅವರು ಮಾತನಾಡಿ, ಸಮಾಜದಲ್ಲಿ ಲಿಂಗ ಸಮಾನತೆ ಬರಬೇಕು. ಸ್ತ್ರೀ ಶಿಕ್ಷಣಕ್ಕೆ ಹೆಚ್ಚು ಪ್ರಾಮುಖ್ಯತೆ ನೀಡಿದಾಗ ಮಹಿಳೆ ಸಬಲಳಾಗುತ್ತಾಳೆ. ಆದರೆ ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡದೇ ಅರ್ಧಕ್ಕೆ ಮೊಟಕುಗೊಳಿಸಲಾಗುತ್ತಿದೆ. ಆದ್ದರಿಂದ ಗ್ರಾಮೀಣ ಸ್ತ್ರೀಯರ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಶಿಕ್ಷಣದ ಜೊತೆಗೆ ಅವರಿಗೆ ವೃತ್ತಿಪರ ತರಬೇತಿ ನೀಡಿ ಆರ್ಥಿಕ ಮತ್ತು ಸಾಮಾಜಿಕವಾಗಿ ಪ್ರಭಾವಶಾಲಿಗಳನ್ನಾಗಿ ಮಾಡಬೇಕು ಎಂದು ಸಲಹೆ ನೀಡಿದರು. ಇತ್ತೀಚಿನ ದಿನಗಳಲ್ಲಿ ಲಿಂಗಬೇಧ ತಾರತಮ್ಯ ಅಧಿಕಗೊಳ್ಳುತ್ತಿದೆ. ಅದು ತಪ್ಪಬೇಕಾದರೆ ಸುಶಿಕ್ಷಿತ ಸಮಾಜ ನಿರ್ಮಾಣ ಮಾಡಬೇಕಾಗಿದೆ. ಹೆಣ್ಣು ಮನೆಯ ಬೆಳಕು ಎಂಬುದನ್ನು ಅರಿತುಕೊಳ್ಳಬೇಕು. ಸ್ತ್ರೀ ಇಲ್ಲದ ಸಮಾಜವನ್ನು ಊಹಿಸಿಕೊಳ್ಳುವದು ಅಸಾಧ್ಯ ಎಂದ ಅವರು, ಪಂಖ ಮೂಲಕ ಕರಕುಶಲ ವೃತ್ತಿಪರ ತರಬೇತಿಯನ್ನು ನೀಡಿ ವಿಭಿನ್ನವಾಗಿ ಯೋಚಿಸುವ ಕಾರ್ಯವಿಧಾನಗಳನ್ನು ತಿಳಿಸಿಕೊಡಲಾಗುತ್ತಿದೆ ಎಂದರು. ಸಮಾರಂಭದ ಅಧ್ಯಕ್ಷತೆಯನ್ನು ಕೆಎಲ್‌ಇ ಸ್ತ್ರೀಶಕ್ತಿ ಸಂಘದ ಉಪಾಧ್ಯಕ್ಷೆ ಡಾ. ಅಲ್ಕಾ ಕಾಳೆ ಅವರು ವಹಿಸಿದ್ದರು. ಸಮಾರಂಭದಲ್ಲಿ ಡಾ. ಆರತಿ ಮಹಿಶ್ಯಾಳೆ, ಡಾ. ಹರಪ್ರೀತ ಕೌರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಆನೆಗೊಂದಿ ಉತ್ಸವ: ಮುಕ್ತ ವಾಲಿಬಾಲ್ ಸ್ಪರ್ಧೆಯ ಫಲಿತಾಂಶ


ಕೊಪ್ಪಳ ಮಾರ್ಚ್ 09– ಆನೆಗೊಂದಿ ಅಂಗವಾಗಿ ಆನೆಗೊಂದಿಯ ಸರ್ಕಾರಿ ಪ್ರೌಢಶಾಲೆಆವರಣದಲ್ಲಿ ಶುಕ್ರವಾರದಂದು ನಡೆದ ರಾಜ್ಯ ಮಟ್ಟದ ಪುರುಷ ಮತ್ತು ಮಹಿಳಾ ವಿಭಾಗದ ಮುಕ್ತ ವಾಲಿಬಾಲ್ ಪಂದ್ಯಾವಳಿಯ ಫಲಿತಾಂಶ ಪ್ರಕಟವಾಗಿದೆ.

*ಪುರುಷ ವಿಭಾಗದ ಫಲಿತಾಂಶ:* ಮುಕ್ತ ವಾಲಿಬಾಲ್ ಸ್ಪರ್ಧೆಯ ಪುರುಷ ವಿಭಾಗದಲ್ಲಿ ಮಂಗಳೂರಿನ ಪರಂ ತಂಡವು ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ.

ಗಂಗಾವತಿಯ ಎಂ.ಎಸ್.ದೋನಿ–ಎ ತಂಡವು ದ್ವಿತೀಯ, ಕಮಲಾಪುರ ತಂಡವು ತೃತೀಯ ಸ್ಥಾನಪಡೆದರೆ, ಗಂಗಾವತಿಯ ಎಂ.ಎಸ್.ದೋನಿ–ಬಿ ತಂಡವು ನಾಲ್ಕನೇ ಸ್ಥಾನವನ್ನು ಪಡೆದುಕೊಂಡಿದೆ.

*ಮಹಿಳಾ ವಿಭಾಗದ ಫಲಿತಾಂಶ:* ಮುಕ್ತ ವಾಲಿಬಾಲ್ ಸ್ಪರ್ಧೆಯ ಮಹಿಳಾ ವಿಭಾಗದಲ್ಲಿ ಹುಲಿಗಿ ತಂಡವು ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ.

ಕೊಪ್ಪಳದ ಡಿ.ವೈ.ಇ.ಎಸ್.ಎಸ್–ಎ ತಂಡವು ದ್ವಿತೀಯ, ಮುಂಡರಗಿಯ ಜಾಲವಾಡಗಿ ತಂಡವು ತೃತೀಯ ಸ್ಥಾನ ಪಡೆದರೆ, ಕೊಪ್ಪಳದ ಡಿ.ವೈ.ಇ.ಎಸ್.ಎಸ್–ಎ ತಂಡವು ನಾಲ್ಕನೇ ಸ್ಥಾನವನ್ನು ಪಡೆದುಕೊಂಡಿದೆ ಎಂದು ಕನಕಗಿರಿ ಉತ್ಸವದ ಕ್ರೀಡಾ ಸಮಿತಿ ಪ್ರಕಟಣೆ ತಿಳಿಸಿದೆ.




GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26